ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಬಂಡವಾಳ ಹೂಡಿಕೆ

ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

972(1121) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರವು ಬಂಡವಾಳ ಹೂಡಿಕೆ ಆಕರ್ಷಣೆಗಾಗಿ ಕಳೆದ ಮೂರು ವರ್ಷಗಳಲ್ಲಿ ಜರುಗಿಸಿರುವ ಸಮಾವೇಶಗಳೆಷ್ಟು; ಈ ಸಮಾವೇಶಗಳಲ್ಲಿ ಎಷ್ಟು ಕಂಪನಿಗಳು/ಬಂಡವಾಳದಾರರು ಭಾಗವಹಿಸಿದ್ದರು ;

(ಆ) ಸದರಿ ಸಮಾವೇಶದಲ್ಲಿ ಭಾಗವಹಿಸಿರುವ ಬಂಡವಾಳ ಹೂಡಿಕೆದಾರರ ಪೈಕಿ ರಾಜ್ಯದಲ್ಲಿ ಎಷ್ಟು ಬಂಡವಾಳದಾರರು ಹೂಡಿಕೆ ಮಾಡಲು ಮುಂದೆ ಬಂದಿದ್ದಾರೆ ಮತ್ತು ಯಾವ ಯಾವ ಕ್ಷೇತ್ರದಲ್ಲಿ ಎಷ್ಟು ಬಂಡವಾಳ ಹೂಡಿಕೆ ಮಾಡಲು ಮುಂದೆ ಬಂದಿದ್ದಾರೆ ;

(ಇ) ಉತ್ತರ ಕರ್ನಾಟಕದಲ್ಲಿ ಯಾವ ಯಾವ ಕ್ಷೇತ್ರದಲ್ಲಿ ಎಷ್ಟು ಬಂಡವಾಳ ಹೂಡಲು ಎಷ್ಟು ಜನ ಹೂಡಿಕೆದಾರರು ಮುಂದೆ ಬಂದಿದ್ದಾರೆ ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಬಂಡವಾಳ ಹೂಡಿಕೆಯಿಂದ ರಾಜ್ಯದಲ್ಲಿ ಮತ್ತು ಉತ್ತರ ಕರ್ನಾಟಕದಲ್ಲಿ ಎಷ್ಟು ಉದ್ಯೋಗ ಸೃಷ್ಟಿಯಾಗಿದೆ / ಸೃಷ್ಟಿಯಾಗಲಿವೆ; (ಪೂರ್ಣ ವಿವರ ನೀಡುವುದು)

(ಉ) ಕಲಬುರಗಿ ಜಿಲ್ಲೆಗೆ ಬಂಡವಾಳ ಹೂಡಲು ಎಷ್ಟು ಜನ ಮುಂದೆ ಬಂದಿದ್ದಾರೆ ?